**ಕರ್ನಾಟಕ ವಿಧಾನ ಪರಿಷತ್ತು**

| | | |
|---|---|---|
| ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ | : | **6 (45)** |
| ಸದಸ್ಯರ ಹೆಸರು | : | ಶ್ರೀ ಎಸ್.ಎಲ್ ಭೋಜೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 09.12.2024 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಪ್ರೌಢಶಾಲಾ ಶಿಕ್ಷಕರುಗಳಿಗೆ ಮತ್ತು ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರುಗಳಿಗೆ ಬಡ್ತಿಯನ್ನು ನೀಡಲು ವಿಳಂಬ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಮುಂಬಡ್ತಿಯನ್ನು ನೀಡದೆ ಇರುವ ಶಿಕ್ಷಕರು ಹಾಗೂ ಉಪನ್ಯಾಸಕರುಗಳ ಒಟ್ಟು ಸಿಬ್ಬಂದಿ ವರ್ಗದವರ ಸಂಖ್ಯೆ ಎಷ್ಟು; | • ಸರ್ಕಾರಿ ಪ್ರೌಢಶಾಲಾ ಶಿಕ್ಷಕರಿಗೆ ಉಪನ್ಯಾಸಕರ ವೃಂದಕ್ಕೆ ಮುಂಬಡ್ತಿ ಹೊಂದಲು ಅರ್ಹವಿರುವ ಶಿಕ್ಷಕರುಗಳ ಸಂಖ್ಯೆ:594.<br>• 2024ರ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಪ್ರಾಂಶುಪಾಲರ ಹುದ್ದೆಗೆ ಮುಂಬಡ್ತಿ ಹೊಂದಲು ಉಪನ್ಯಾಸಕರ ಹುದ್ದೆಯಲ್ಲಿ ಹತ್ತು ವರ್ಷಗಳ ಸೇವಾವಧಿಯನ್ನು ನಿಗದಿಪಡಿಸಲಾಗಿದೆ. ಸದರಿ ನಿಯಮಗಳನ್ವಯ ಪ್ರಾಂಶುಪಾಲರ ಹುದ್ದೆಗೆ ಮುಂಬಡ್ತಿ ಹೊಂದಲು ನಿಗದಿತ ಹತ್ತು ವರ್ಷಗಳ ಸೇವಾವಧಿಯನ್ನು ಪೂರ್ಣಗೊಳಿಸಿರುವ ಉಪನ್ಯಾಸಕರ ಸಂಖ್ಯೆ:7151. |
| ಇ) | ಸದರಿ ಪ್ರೌಢಶಾಲಾ ಶಿಕ್ಷಕರುಗಳಿಗೆ ಹಾಗೂ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರುಗಳಿಗೆ ಶೀಘ್ರದಲ್ಲಿ ಬಡ್ತಿಯನ್ನು ನೀಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು? | **ಸರ್ಕಾರಿ ಪ್ರೌಢಶಾಲಾ ಶಿಕ್ಷಕರಿಗೆ ಸಂಬಂಧಿಸಿದಂತೆ**<br>ಪ್ರೌಢಶಾಲಾ ಶಿಕ್ಷಕರುಗಳಿಗೆ ಪದವಿಪೂರ್ವ ಕಾಲೇಜುಗಳ ಉಪನ್ಯಾಸಕರ ಹುದ್ದೆಗೆ ಮುಂಬಡ್ತಿ ನೀಡುವ ಸಂಬಂಧ ದಿನಾಂಕ:23.10.2024ರಲ್ಲಿ ಶಾಲಾ ಶಿಕ್ಷಣ ಇಲಾಖೆಯ ಸಹ ನಿರ್ದೇಶಕರ ನಾಲ್ಕು ವಿಭಾಗಗಳಲ್ಲಿ ಸ್ನಾತಕೋತರ ಪದವಿ ಪಡೆದ ಅರ್ಹ ಪ್ರೌಢಶಾಲಾ ಸಹ ಶಿಕ್ಷಕರ ಜೇಷ್ಠತಾ ಪಟ್ಟಿಯನ್ನು ಪರಿಶೀಲಿಸಿ ಸಾಮಾನ್ಯ ಜೇಷ್ಠತಾ ಪಟ್ಟಿಯನ್ನು ಅಂತಿಮಗೊಳಿಸಿ ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತೆ) ನಿಯಮಗಳು 1957ರ ನಿಯಮ 7-ಎ ರಡಿ ಅಂತಿಮ ರಾಜ್ಯಮಟ್ಟದ ಒಂದೇ ಜೇಷ್ಠತಾ ಪಟ್ಟಿಯನ್ನು ತಯಾರಿಸಲು ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಸೂಚಿಸಲಾಗಿದೆ.<br>ಅದರಂತೆ ರಾಜ್ಯಮಟ್ಟದ ಒಂದೇ ಜೇಷ್ಠತಾ ಪಟ್ಟಿಯನ್ನು ತಯಾರಿಸಲು ಕೈಗೊಳ್ಳಬೇಕಾದ ಮುಂದಿನ ಕ್ರಮಗಳ ಬಗ್ಗೆ ಚರ್ಚಿಸಿ ಅಂತಿಮಗೊಳಿಸುವ ಸಂಬಂಧ ದಿನಾಂಕ:03.12.2024ರಂದು ಅಪರಾಹ್ನ ನಿರ್ದೇಶಕರು, ಅಪರ ಆಯುಕ್ತರ ಕಛೇರಿ, ಧಾರವಾಡ |

ಮತ್ತು ಕಲಬುರುಗಿ ವಿಭಾಗೀಯ ಸಹ ನಿರ್ದೇಶಕರು (ಬೆಂಗಳೂರು, ಮೈಸೂರು, ಬೆಳಗಾವಿ ಮತ್ತು ಕಲಬುರುಗಿ) ಜಂಟಿ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆರವರನ್ನೊಳಗೊಂಡಂತೆ ಮಾನ್ಯ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಇವರ ಅಧ್ಯಕ್ಷತೆಯಲ್ಲಿ ಸಭೆ ನಡೆಸಲಾಗಿರುತ್ತದೆ.

ವಿಭಾಗೀಯ ಕಛೇರಿಗಳಿಂದ ಜೇಷ್ಠತಾ ಪಟ್ಟಿಯನ್ನು ಪಡೆದ ನಂತರ ರಾಜ್ಯಮಟ್ಟದ ಒಂದೇ ಜೇಷ್ಠತಾ ಪಟ್ಟಿಯ ಕರಡನ್ನು ಪ್ರಕಟಿಸಿ ಆಕ್ಷೇಪಣೆಗಳನ್ನು ಆಹ್ವಾನಿಸಿ, ಸ್ವೀಕೃತವಾಗುವ ಆಕ್ಷೇಪಣೆಗಳಿಗೆ ಉತ್ತರಿಸಿ ಅಂತಿಮ ರಾಜ್ಯ ಮಟ್ಟದ ಒಂದೇ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಲು ಅಂದಾಜು 03 ತಿಂಗಳ ಕಾಲಾವಕಾಶ ಕೋರಿರುತ್ತಾರೆ.

**ಉಪನ್ಯಾಸಕರ ಹುದ್ದೆಯಿಂದ ಪ್ರಾಂಶುಪಾಲರ ಹುದ್ದೆಗೆ ಬಡ್ತಿ:**

ಶಾಲಾ ಶಿಕ್ಷಣ ಇಲಾಖೆ (ಪದವಿಪೂರ್ವ) ಉಪನ್ಯಾಸಕರಿಂದ ಪ್ರಾಂಶುಪಾಲರ ಹುದ್ದೆಯ ಬಡ್ತಿಗೆ ಸಂಬಂಧಿಸಿದಂತೆ ಪ್ರಾಂಶುಪಾಲರ ವೃಂದದಲ್ಲಿ ಬಡ್ತಿ ಕೋಟಾದಡಿ ಖಾಲಿ ಇರುವ ಮತ್ತು ಖಾಲಿಯಾಗಲಿರುವ 304 ಹುದ್ದೆಗಳಿಗೆ ಮುಂಬಡ್ತಿ ನೀಡಲು ಸರ್ಕಾರಿ ಪದವಿಪೂರ್ವ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ 300 ಉಪನ್ಯಾಸಕರುಗಳ ಮತ್ತು ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದದ 61 ಉಪನ್ಯಾಸಕರ ಅಗತ್ಯ ವ್ಯಕ್ತಿಪೂರ್ವೋತ್ತರ ದಸ್ತಾವೇಜುಗಳೊಂದಿಗೆ ನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆರವರು ದಿನಾಂಕ:07.03.2024ರಂದು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದು, ಸರ್ಕಾರಿ ಪದವಿಪೂರ್ವ ಕಾಲೇಜುಗಳ ಉಪನ್ಯಾಸಕರಿಗೆ ಪ್ರಾಂಶುಪಾಲರ ವೃಂದಕ್ಕೆ ಬಡ್ತಿ ನೀಡುವ ಕುರಿತಂತೆ ದಿನಾಂಕ:12.03.2024ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಇಲಾಖಾ ಮುಂಬಡ್ತಿ ಸಮಿತಿ ಸಭೆಯನ್ನು ನಡೆಸಲಾಗಿತ್ತು.

ತದನಂತರ, ಕರ್ನಾಟಕ ವಿಧಾನಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯು ದಿನಾಂಕ:14.03.2024ರಂದು ನಡೆಸಿದ ಸಭೆಯಲ್ಲಿ ಶಾಲಾ ಶಿಕ್ಷಣ ಇಲಾಖೆ (ಪದವಿಪೂರ್ವ)ಯಲ್ಲಿ 2016 ರಿಂದ ಇಲ್ಲಿಯವರೆಗೆ ಉಪನ್ಯಾಸಕರ ವೃಂದದಿಂದ ಪ್ರಾಂಶುಪಾಲರ ವೃಂದಕ್ಕೆ ಮುಂಬಡ್ತಿ ನೀಡುವ ಸಂದರ್ಭಗಳಲ್ಲಿ ಮೀಸಲಾತಿಯನ್ನು ಪಾಲಿಸದಿರುವ ಕುರಿತು ಸಮಾಜ ಕಲ್ಯಾಣ ಇಲಾಖೆ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಹಾಗೂ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಗಳು ಒಟ್ಟಾಗಿ ಪರಿಶೀಲಿಸಿ ಬ್ಯಾಕ್ ಲಾಗ್ ಹುದ್ದೆಗಳನ್ನು ಗುರುತಿಸುವವರೆಗೂ ಪದವಿಪೂರ್ವ ಶಿಕ್ಷಣ ಇಲಾಖೆಯಲ್ಲಿ ಪ್ರಾಂಶುಪಾಲರ ವೃಂದಕ್ಕೆ ಮುಂಬಡ್ತಿ ಪ್ರಕ್ರಿಯೆಯನ್ನು ನಡೆಸಬಾರದೆಂದು ಸಮಿತಿಯು ಸೂಚಿಸಿರುತ್ತದೆ.

| | | |
|---|---|---|
| | | ಸದರಿ ಸಮಿತಿಯ ಸೂಚನೆಯಂತೆ ಉಪನ್ಯಾಸಕರ ವೃಂದದಿಂದ ಪ್ರಾಂಶುಪಾಲರ ವೃಂದಕ್ಕೆ ಮುಂಬಡ್ತಿ ನೀಡುವಲ್ಲಿ ಉಂಟಾಗಿರುವ ಬ್ಯಾಕ್ ಲಾಗ್ ಹುದ್ದೆಗಳು ಮತ್ತು ಮೀಸಲಾತಿ ರೋಸ್ಟರ್ ಬಗ್ಗೆ ಚರ್ಚಿಸಲು ಸರ್ಕಾರದ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಅಧ್ಯಕ್ಷತೆಯಲ್ಲಿ ದಿನಾಂಕ:03.04.2024 ರಂದು ಸಭೆ ನಡೆದಿದ್ದು, ಸದರಿ ಸಭೆಯಲ್ಲಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಹಾಗೂ ಸಮಾಜ ಕಲ್ಯಾಣ ಇಲಾಖೆಯೊಂದಿಗೆ ಚರ್ಚಿಸಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆರವರು ಅಂತಿಮವಾಗಿ 02 ಅಂಶಗಳ ಕುರಿತು ಮತ್ತೊಮ್ಮೆ ಪರಿಶೀಲಿಸಿ ಕ್ರಮ ಕೈಗೊಳ್ಳುವಂತೆ ತಿಳಿಸಿರುತ್ತಾರೆ. ಸದರಿ ಅಂಶಗಳನ್ನು ಪರಿಶೀಲಿಸಿ, ನಿರ್ದೇಶಕರು, ಶಾಲಾ ಇಲಾಖೆ (ಪದವಿ ಪೂರ್ವ) ರವರು ಸರ್ಕಾರಕ್ಕೆ ವರದಿ ಸಲ್ಲಿಸಿರುತ್ತಾರೆ.<br><br>ಈ ಮಧ್ಯೆ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ರವರ ಅಧ್ಯಕ್ಷತೆಯಲ್ಲಿ ದಿನಾಂಕ:11.11.2024 ರಂದು ಸಭೆ ನಡೆಸಲಾಗಿದ್ದು, ಸದರಿ ಸಭೆಯ ನಿರ್ಣಯದಂತೆ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ರವರ ಪತ್ರ ಸಂಖ್ಯೆ:ಸಕನಿ:ಮೀ:ಜಾಕೋ- ಸಿ1:ಸಿಆರ್-+60:2016-17, ದಿನಾಂಕ:14.11.2024 ರ ಪತ್ರದಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ವೃಂದದಿಂದ ಪ್ರಾಂಶುಪಾಲರ ವೃಂದದ ಹುದ್ದೆಗೆ ಬಡ್ತಿ ನೀಡುವ ಕುರಿತು ಒಟ್ಟು 08 ಅಂಶಗಳ ಮಾಹಿತಿಯನ್ನು ಒದಗಿಸುವಂತೆ ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ)ರವರನ್ನು ಕೋರಿರುತ್ತಾರೆ.<br><br>ಸದರಿ 08 ಅಂಶಗಳಿಗೆ ಸಂಬಂಧಿಸಿದಂತೆ ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ)ರವರ ಪತ್ರ :DPUE-EST10KAT/3/2023/990795 ದಿನಾಂಕ:26.11.2024 ರ ಪತ್ರದಲ್ಲಿ ಸಮಾಜ ಕಲ್ಯಾಣ ಇಲಾಖೆಗೆ ಈಗಾಗಲೇ ವರದಿ ಸಲ್ಲಿಸಲಾಗಿದ್ದು, ಪ್ರಸ್ತುತ ಸಮಾಜ ಕಲ್ಯಾಣ ಇಲಾಖೆ ರವರು ನೀಡುವ ಅಂತಿಮ ವರದಿಯನ್ನು ನಿರೀಕ್ಷಿಸಲಾಗುತ್ತಿದ್ದು, ಸಮಾಜ ಕಲ್ಯಾಣ ಇಲಾಖೆಯಿಂದ ಅಂತಿಮ ವರದಿ ಸ್ವೀಕೃತವಾದ ನಂತರ ಈ ಬಗ್ಗೆ ನಿಯಮಾನುಸಾರ ಕ್ರಮವಹಿಸಲಾಗುವುದು. |

ಸಂಖ್ಯೆ:ಇಪಿ 294 ಎಲ್‌ಬಿಪಿ 2024

**(ಎಸ್. ಮಧು ಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು